**ಒಲವಾದೊಡೆ ರೂಪಿನ ಕೋಟಲೆಯೇವುದು...ಜನ್ನ (ಯಶೋಧರ ಚರಿತೆ)**

ಹೀಗೆ ಶೋಭಿಸುವ ಆ ಧವಳಾಗಾರದಲ್ಲಿ ಚಂದ್ರಮತಿಯ ಮಗ ಯಶೋಧರನು ಅಮೃತಮತಿಯೊಂದಿಗೆ,. ಅಭ್ರಮುವನ್ನು ಕೂಡಿಕೊಂಡು ಐರಾವತವು ಬಹು ಸಂಭ್ರಮದಿಂದ ಶಯ್ಯಾಗಾರಕ್ಕೆ ಬಂದಂತೆ ಈ ದಂಪತಿಗಳು ಕಾಣುತ್ತಿದ್ದರು.ಸಮಾಗಮ ಪ್ರೌಢಿಮೆ ಯಿಂದ ಅವರಿಬ್ಬರೂ ಮೈಮರೆತು ಪರಸ್ಪರರ ತೋಳುಗಳು ಹೆಣೆದುಕೊಂಡು ನಿದ್ರಾವಶರಾದರು. ಪ್ರಣಯಿಗಳಿಬ್ಬರೂ ಮಲಗಿದ ಹೊತ್ತು. ಜಾವದ ಉಕ್ಕಡಗಳಲ್ಲಿ ಅತ್ತಿತ್ತ ಸುತ್ತುತ್ತಿರುವ ಯಾಮಿಕರ ಸದ್ದೆಲ್ಲಾ ಅಡಗಿತು. ಆಗ ಆ ಅರಮನೆಯ ಪಕ್ಕದಲ್ಲಿದ್ದ ಪಟ್ಟದಾನೆಯ ಮಾವುತನು, ತನ್ನ ಸರದಿ ಬಂದಂತೆ ತನ್ನ ಮನಸ್ಸಂತೋಷಕ್ಕಾಗಿ ಹಾಡತೊಡಗಿದನು. ಅವನ ಹಾಡಿನ ಇಂಪಾದ ಧ್ವನಿ ಅಮೃತಮತಿಯ ನಿದ್ದೆಗೆ ಕತಕಬೀಜ ವಾದಂತಾಯಿತು. ಅವಳು ನಿದ್ದೆ ತಿಳಿದೆದ್ದಳು ; ಹಾಡನ್ನು ಕಿವಿಗೊಟ್ಟು ಕೇಳಿದಳು. ಅದು ಅವಳ ಮನಸ್ಸನ್ನು ಮುಟ್ಟಿತು. ಕೂಡಲೇ ಆ ಮನಸ್ಸನ್ನು ಮೆಚ್ಚಿನ ಉಡುಗೊರೆಯನ್ನು ತೆತ್ತುಬಿಟ್ಟಳು. ಅಮೃತಮತಿಯ ಮನಸ್ಸು ಕದಡಿ ಹೋಯಿತು. ಅವಳಿಗೆ ಕಣ್ಣಲ್ಲೇ ಬೆಳಗಾಯಿತು. ಬೆಳಗಾಗುವವರೆಗೂ ಅವನನ್ನು ಹೇಗೆ ನೋಡಲಿ, ಹೇಗೆ ಕೂಡಿಕೊಳ್ಳಲಿ ಎಂಬ ಚಿಂತೆಯೇ ಕಡಲಂತೆ ಉಕ್ಕಿ ಹರಿಯಿತು. ಬೆಳಗಾದ ಕೂಡಲೇ ಅವಳು ತನ್ನ ನಚ್ಚುಮೆಚ್ಚಿನ ಗೆಳತಿಯನ್ನು ಕರೆದು ಅವಳೊಡನೆ ತನ್ನ ಅಂತರಂಗದ ಬಯಕೆಯನ್ನೆಲ್ಲ ಬಯಲು ಮಾಡಿದಳು. ಮಾವುತನ ಬಳಿಗೆ ಆಕೆಯನ್ನು ಕಳುಹಿಸಿಕೊಟ್ಟಳು. ಒಡತಿಯ ಅಪ್ಪಣೆಯ ಪ್ರಕಾರ ಅವಳು ಮಾವುತನ ಬಳಿಗೆ ನಡೆದಳು. ಅವನನ್ನು ದೂರದಿಂದ ಕಂಡುದೇ ತಡ, ಅವಳ ಕಣ್ಣಿಗೆ ಮನಸ್ಸಿಗೂ ಓಕರಿಕೆಯುಂಟಾಯಿತು. ಅವಳಿಗೆ ಅಲ್ಲಿ ನಿಲ್ಲುವುದಕ್ಕೆ ಸಾಧ್ಯವಾಗದೆ ಕೂಡಲೆ ಹಿಂತಿರುಗಿದಳು. “ಅಯ್ಯೋ ದೇವರೇ ! ಅಮೃತಮತಿಯೆಲ್ಲಿ ರೂಪಾಧಮನಾದ ಅಷ್ಟಾವಂಕನೆಲ್ಲಿ ? 'ಚಿತ್ರಂ ! ಅಪಾತ್ರೆ ರಮತೇ ನಾರಿ' (ಅಶ್ಚರ್ಯ ! ಹೆಂಗಸು ಅಯೋಗ್ಯನೊಡನೆ ರಮಿಸುತ್ತಾಳೆ!) ಎಂಬ ಮಾತು ಸಂಭವಿಸಿತಲ್ಲ ! ಆ ಸುಟ್ಟ ಪ ವಿಧಿಗೆ ಕಣ್ಣು ಇಲ್ಲವೋ !. ಎಂದೆಲ್ಲ ಯೋಚನೆ ಅವಳ ತಲೆಯಲ್ಲಿ ಸುಳಿಯಿತು. ಇದನ್ನೇ ಹೊತ್ತು ಅವಳು ಮರಳಿದಳು. ಇಲ್ಲಿ ನೋಡುವುದೇನು ? ಆ ರಾಜೇಂದ್ರನ ಪತ್ನಿ ಅಮೃತಮತಿ ಮುಖ ಬಾಡಿಸಿಕೊಂಡೇ ಇದ್ದಾಳೆ. ತನ್ನ ಗೆಳತಿ ಯಾವಾಗ ಮರಳಿಯಾಳು ಎಂದು ಅವಳು ಬರುವ ದಾರಿಯಲ್ಲೇ ಕಣ್ಣಿಟ್ಟು ಕೊಂಡಿದ್ದಾಳೆ. ಬಿಡುವ ಬಿಸಿಯುಸಿರು ತಾಗಿ ತುಟಿಯ ಸಹಜವಾದ ಕೆಂಬಣ್ಣವೆಲ್ಲ ಕಳೆದುಹೋಗಿದೆ. ಹೀಗೆ ಉತ್ಕಂಠಿತೆಯಾಗಿದ್ದ ಒಡತಿಯನ್ನು ಸಮೀಪಿಸಿ ಅವಳು ಹೇಳಿದಳು. ೩೬. "ಕಾಮನ ಕೈಯ ಖಡ್ಗದಂತೆ ಬಹಳ ಚೆಲುವನ್ನು ಪಡೆದು ಶೋಭಿಸುವ ತನುಗಾತ್ರಿ ನೀನು. ಇಂತಹ ನೀನು, ಈ ಬಗೆಯ ಕಾಮದೇವನನ್ನು ಹೇಗೆ ಶೋಧನೆ ಮಾಡಿದೆ ! ಹೇಗೆ ಒಲಿದೆ ನನಗೆ ಇದಾವುದೂ ಗೊತ್ತಾಗುವುದಿಲ್ಲ! . ಅವನು ಯಾವ ರೀತಿಯಲ್ಲಿದ್ದಾನೆಂದು ಹೋಲಿಸಿ ತೋರಿಸೋಣವೆಂದರೆ ಜಗತ್ತಿನಲ್ಲಿ ಅವನಂತೆ ಬೇರೆ ಯಾರೂ ಇರುವುದಕ್ಕೆ ಸಾಧ್ಯವಿಲ್ಲ !” ಗೆಳತಿಯ ಕೊಂಕುಮಾತಿನ ಅರ್ಥ ಅಮೃತಮತಿಗಾಗಲಿಲ್ಲ. ಅವಳ ಕುತೂಹಲ ಮತ್ತಷ್ಟು ಕೆರಳಿತು : “ಹೇಳು, ಹೇಳು ! ನನ್ನ ಕಾದಲನು ಅಷ್ಟು ಸುಂದರನೆ ? ಎಲೆ ದೂತಿ, ಬೇಗನೇ ಹೇಳು, ಹೇಳದೆ ನೀನು ನನ್ನನ್ನು ಕೊಲ್ಲುತ್ತೀಯಲ್ಲ!” ಎಂದು ತ್ವರೆಪಡಿಸಿದಳು. “ಅವನ ತಲೆಗೂದಲು ಅಲ್ಲಲ್ಲಿ ಕಿತ್ತು ಹೋಗಿದೆ. ಹಣೆ ಹೊಂಡ ಬಿದ್ದಿದೆ. ಕಣ್ಣು ಕೊಳೆತು ಹೋಗಿದೆ. ಬಾಯಿ ಜೊಲ್ಲು ಸುರಿಸುತ್ತಲೇ ಇದೆ. ಚಪ್ಪಟೆಯಾದ ಮೂಗು, ಮುರುಟಿದ ಕಿವಿ, ಬಿರಿದ ಹಲ್ಲು ಕೊರಳು ಕುಗ್ಗಿ, ಎದೆ ಒಳ ನುಗ್ಗಿ ಬೆನ್ನು ಹೊರಚಾಚಿದೆ. ಹೊಟ್ಟೆ ಬಾತುಕೊಂಡಿದೆ ; ಜಘನವು ಅಡಗಿಯೇ ಹೋಗಿದೆಕರೆ ಮೆತ್ತಿದ ಚರ್ಮ, ಹಳೆಯ ಹೊಂಡವನ್ನು ಹೊರ ತೆಗೆದಂತಹ ವಾಸನೆ ಅವನ ದೇಹದಿಂದ ಹಬ್ಬುತ್ತಾ ಇದೆ. ಅವನ ಕೈಗಳೂ, ಚಿಕ್ಕ ಕಣ್ಣುಗಳೂ, ಗೂನುಬೆನ್ನೂ ಕಾಲುಗಳೂ ಸೊಂಟ ಮುರಿದ ಕತ್ತೆಯ ಕಾಲನ್ನೂ ಮೀರಿಸುವಂತಿವೆ. ಮುದಿಕರಡಿಯ ಹಳೆಯ ಚರ್ಮದಂತೆ ಕಪ್ಪು ಕರಿಯಾಗಿದೆ ಅವನ ದೇಹದ ಬಣ್ಣ. ತಾಳೆಯ ಮರದಂತೆ ಒರಟೊರಟಾದ ಶರೀರ, ಕಟ್ಟಿಗೆಯ ಕಟ್ಟಿನಂತೆ ಅಂಕು ಡೊಂಕಾಗಿ ಅಷ್ಟವಕ್ರವಾಗಿದೆ. ಎಂದೋ ಒಣಗಿಹೋದ ವಕ್ರವಾದಒಂದು ಮರದ ಕೊರಡಿನಂತಿದೆ. ”ದೂತಿ ಹೇಳಿದ ಇಷ್ಟು ವಿಸ್ತೃತವಾದ ವಿವರಣೆಯನ್ನು ಕೇಳುತ್ತಾ ಇದ್ದಂತೆ, ಅಮೃತಮತಿಯ ಗಂಟಲು ಗರಗರ ಎಂದು ಸದ್ದುಮಾಡಿತು, ಕಣ್ಣಲ್ಲಿ ನೀರು ತುಂಬಿ ಕೊಂಡಿತು. ಎದೆ ನಡುಗಿತು. ಕಾಡಿನ ಜಿಂಕೆಗೆ

ಬೇಡನ ಬಾಣ ನಾಟಿದಂತೆ ಅವಳೊಮ್ಮೆ ಸಂಭೀಭೂತಳಾದಳು. ಬಳಿಕ ಮೆಲ್ಲನೆ ಮಾತಿಗಾರಂಭಿಸಿದಳು. ೪೨. ಕಸ್ತೂರಿಯ ಬಣ್ಣ ಕಪ್ಪು, ಅದನ್ನು ಆ ಬಣ್ಣದಿಂದಾಗಿ ಕಡೆಗಾಣಿಸುವವರಿದ್ದಾರೆಯೆ ? ಗಂಟುಗಂಟಾಗಿ ಇದೆಯೆಂದು ಗಂಧದ ಕೊರಡನ್ನು ತಿರಸ್ಕರಿಸುತ್ತಾರೆಯೆ? ಕಾಮನ ಬಿಲ್ಲು ಕೊಂಕಾಗಿದ್ದರೂ ಅದನ್ನು ಯಾರೂ ಹೀನಯಿಸುವುದಿಲ್ಲವಲ್ಲ ! ಹುಚ್ಚ, ನಮ್ಮ ಮೆಚ್ಚಿನವರ ಮೆಯಲ್ಲಿ ದೋಷವಿದ್ದರೆ ಅದೇ ಅವರ ಮೇಲ್ಮೆಯೆನ್ನಿಸುತ್ತದೆ. ೪೩. ಅದೂ ಅಲ್ಲದೆ, ಮನಸ್ಸು ಮೆಚ್ಚಿದೆಯೆಂದಾದರೆ, ಮತ್ತೆ ರೂಪದ ಪ್ರಶ್ನೆಯೇ ಏಳುವುದಿಲ್ಲ, ಕಾರ್ಯವಾದ ಮೇಲೆ ಕಾರಣದಿಂದೇನು ಪ್ರಯೋಜನ ? ಇಂದು ನನಗೆ ಅವನೇ ಕುಲದೈವ. ಅವನೇ ಕಾಮದೇವ, ಅವನೆ ಇಂದ್ರ, ಅವನ ಚಂದ್ರ '' 'ಅಮೃತ ಮತಿ ಅವಳಿಗೆ ಲಂಚವನ್ನಿತ್ತಳು . ತನ್ನ ವಶವರ್ತಿನಿಯಾಗುವಂತೆ ಮಾಡಿಕೊಂಡಳು. ಅವಳೊಡನೆ ಹೇಳಬೇಕಾದುದನೆಲ್ಲ ಹೇಳಿದಳು. ಅವಳಿಂದ ಸಮ್ಮತಿಯ ಮಾತನ್ನೂ ಪಡೆದಳು. ಅವಳನ್ನು ತನ್ನಿನಿಯನಲ್ಲಿಗೆ ಹಿಸಿಕೊಟ್ಟಳು. ಕಾರ್ಯವನ್ನು ಕೈಗೂಡಿಸಿದಳು. ಇಬ್ಬರನ್ನೂ ಒಂದುಗೂಡಿಸಿದಳು. ಅಂದಿನಿಂದ ಅಮೃತಮತಿ ಹಗಲೂ ಇರುಳೂ ಬಿಡುವಿದ್ದಾಗಲೆಲ್ಲ ಪಆತನೊಡನಾಟದಲ್ಲಿಯೇ ಕಾಲ ಕಳೆಯತೊಡಗಿದಳು. ಸೌಂದರ್ಯದ ಅಧಿದೇವತೆಯಂತಿದ್ದ ಅಮೃತಮತಿಗೆ ವಿಕಟಾಂಗನ ಒಡನಾಟದಲ್ಲಿಯೂ ಕೂಟದಲ್ಲಿಯೂ ಬಹಳ ಸವಿಯೇ ಕಂಡಿತು. ಬೇವನ್ನು ಮೆಚ್ಚಿದ ಕಾಗೆಗೆ ಮಾವು ಮೆಚ್ಚಿಗೆಯಾದೀತೆ? ಅಮೃತಮತಿಗೂ ಯಶೋಧರನಲ್ಲಿ ಮನಸ್ಸು ಮುರುಟಿ ಹೋಯಿತು.